Publication - Prajavani

Date 01/12/2013
Page No 2 B

ಪ್ರಜಾವಾಣಿ
ಭಾನುವಾರ
1ನೇ ಡಿಸೆಂಬರ್ 2013
2 B

# 'ಪ್ರತಿ ಜಿಲ್ಲೆಯಲ್ಲಿಯೂ ಮಾನಸಿಕ ಚಿಕಿತ್ಸಾ ಕೇಂದ್ರ'

ಪ್ರಜಾವಾಣಿ ವಾರ್ತೆ

ಬೆಂಗಳೂರು: 'ಪ್ರತಿ ಜಿಲ್ಲೆಯಲ್ಲಿಯೂ ಮಾನಸಿಕ ಚಿಕಿತ್ಸೆ ಮತ್ತು ಪುನರ್ವಸತಿ ಕೇಂದ್ರಗಳನ್ನು ತೆರೆಯಲಾಗುವುದು' ಎಂದು ಆರೋಗ್ಯ ಸಚಿವ ಯು.ಟಿ. ಖಾದರ್ ತಿಳಿಸಿದರು.

ಕಡಬಮ್ಸ್ ಸಂಸ್ಥೆಯು ಶನಿವಾರ ನಗರದಲ್ಲಿ ಆಯೋಜಿಸಿದ್ದ 'ವ್ಯಸನ ಹಾಗೂ ಪುನರ್ವಸತಿ ಕೇಂದ್ರವಾದ ಅನುನಿತಾ' ಗೆ ಚಾಲನೆ ನೀಡಿ ಅವರು ಮಾತನಾಡಿದರು.

'ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಕೇಂದ್ರಗಳನ್ನು ಸ್ಥಾಪಿಸಿ, ಸರ್ಕಾರದಿಂದ ಪ್ರತಿ ತಿಂಗಳಿಗೆ ₹ 18 ಲಕ್ಷವನ್ನು ಬಿಡುಗಡೆ ಮಾಡಲಾಗುವುದು' ಎಂದು ಘೋಷಿಸಿದರು.

'ಪ್ರತಿ ಗ್ರಾಮೀಣ ಮಟ್ಟದಲ್ಲಿಯೂ ಮಾನಸಿಕ ಚಿಕಿತ್ಸೆ ಮತ್ತು ಪುನರ್ವಸತಿ ಕೇಂದ್ರದ ಸೇವೆ ಒದಗಿಸಲು ಅಲ್ಲಿರುವ ಆರೋಗ್ಯ ಕೇಂದ್ರಗಳಲ್ಲಿ ₹ 20,000 ಬಾಡಿಗೆ ನೀಡಿ ಸೇವೆಗೆ ಅವಕಾಶ ಒದಗಿಸಲಾಗುವುದು' ಎಂದರು.

ರಾಜ್ಯಪಾಲ ಎಚ್.ಆರ್. ಭಾರದ್ವಾಜ್ ಮಾತನಾಡಿ, 'ದೇಶದಲ್ಲಿ ಶಾಲೆಗಳು ಮತ್ತು ಆರೋಗ್ಯ ಕೇಂದ್ರಗಳು ಜನಸಾಮಾನ್ಯರಿಗೆ ಹೆಚ್ಚು ಉಪಯೋಗವಾಗುವಂತೆ ಮಾಡಬೇಕು. ಅವುಗಳು ಸಮಾಜ ಸೇವೆ ಮಾಡುವ ಮಾರ್ಗಗಳು. ಅವುಗಳ ಸೇವೆಯು ವ್ಯಾಪಾರವಾಗಬಾರದು' ಎಂದು ಹೇಳಿದರು.

'ಆರೋಗ್ಯವು ಜನಸಾಮಾನ್ಯರಿಗೆ ಸಿಗಲಾರದಷ್ಟು ದುಬಾರಿಯಾಗಿದೆ. ಆರೋಗ್ಯವು ಜನಸಾಮಾನ್ಯರಿಗೂ ದೊರೆಯುವಂತೆ ಮಾಡುವ ಕರ್ತವ್ಯ ಸರ್ಕಾರದ್ದಾಗಿದೆ' ಎಂದು ತಿಳಿಸಿದರು.

'ಮದ್ಯ ವ್ಯಸನ ಕೇಂದ್ರಗಳಿಗೆ ವೈದ್ಯರ ನೇಮಕವೂ ನಡೆಯಬೇಕು. ಈ ಕುರಿತು ಸರ್ಕಾರ ಕ್ಯಾಬಿನೆಟ್ ಸಭೆಯಲ್ಲಿ ಚರ್ಚಿಸಿ ಕ್ರಮ ಕೈಗೊಳ್ಳಬೇಕು' ಎಂದು ಸಲಹೆ ನೀಡಿದರು.

ತಮಿಳುನಾಡು ರಾಜ್ಯಪಾಲ ಕೆ.ರೋಸಯ್ಯ, 'ಇಂದು ಯುವಜನತೆ ಮದ್ಯ ಮತ್ತು ಮಾದಕ ವಸ್ತುಗಳಿಗೆ ದಾಸರಾಗುತ್ತಿದ್ದಾರೆ. ಇದರಿಂದ, ಯುವಜನತೆಗೆ ಸರಿಯಾದ ಮಾರ್ಗದರ್ಶನ ಮತ್ತು ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಬೇಕಾದ ಅಗತ್ಯವಿದೆ' ಎಂದರು.

'ಮದ್ಯ ಮತ್ತು ಮಾದಕ ವಸ್ತುಗಳ ಸೇವನೆಯು ಸಮಾಜವನ್ನು ರೋಗಗ್ರಸ್ತವನ್ನಾಗಿ ಮಾಡುತ್ತಿದೆ. ಒಬ್ಬನಿಂದ ಇಡೀ ಕುಟುಂಬವೇ ಸಮಸ್ಯೆಗಳನ್ನು ಎದುರಿಸಬೇಕಾಗುತ್ತದೆ' ಎಂದು ಹೇಳಿದರು.

ನಿಮ್ಹಾನ್ಸ್ ನಿರ್ದೇಶಕ ಡಾ.ಪಿ. ಸತೀಶ್ ಚಂದ್ರ ಮಾತನಾಡಿ, 'ದೈಹಿಕ ಕಾಯಿಲೆಗಿಂತ ಇಂದು ಮಾನಸಿಕ ಕಾಯಿಲೆಗಳು ಹೆಚ್ಚಾಗುತ್ತಿವೆ. ದೇಶದಲ್ಲಿ ಶೇ 3 ರಷ್ಟು ಜನ ತೀವ್ರತರವಾದ ಮಾನಸಿಕ ಕಾಯಿಲೆಯಿಂದ ಬಳಲುತ್ತಿದ್ದಾರೆ. ಮದ್ಯ, ತಂಬಾಕಿನ ಪುರುಷ ವ್ಯಸನಿಗಳಂತೆ ಸ್ತ್ರೀ ವ್ಯಸನಿಗಳೂ ಹೆಚ್ಚಾಗುತ್ತಿದ್ದಾರೆ. ಇದು ಈ ಸಂದರ್ಭದಲ್ಲಿ ಆತಂಕ ಪಡುವ ವಿಷಯವಾಗಿದೆ' ಎಂದರು.

'ಸಾರ್ವಜನಿಕ ಮತ್ತು ಖಾಸಗಿ ಸಹಭಾಗಿತ್ವದಲ್ಲಿ ಮದ್ಯ ವ್ಯಸನ ಮತ್ತು ಪುನರ್ವಸತಿ ಕೇಂದ್ರಗಳು ಕೆಲಸ ಮಾಡಬೇಕು' ಎಂದು ಹೇಳಿದರು.



ಕಡಬಮ್ಸ್ ಸಂಸ್ಥೆಯು ಶನಿವಾರ ನಗರದಲ್ಲಿ ಆಯೋಜಿಸಿದ್ದ 'ವ್ಯಸನ ಹಾಗೂ ಪುನರ್ವಸತಿ ಕೇಂದ್ರವಾದ ಅನುನಿತಾ' ಕೇಂದ್ರವನ್ನು ಉದ್ಘಾಟಿಸಿದ ರಾಜ್ಯಪಾಲ ಎಚ್.ಆರ್.ಭಾರದ್ವಾಜ್ ಅವರು ತಮಿಳುನಾಡು ರಾಜ್ಯಪಾಲ ಕೆ.ರೋಸಯ್ಯ ಅವರೊಂದಿಗೆ ಮಾತುಕತೆಯಾಡಿದರು. ಕಡಬಮ್ಸ್ ಅಧ್ಯಕ್ಷ ಎಂ.ದಿನೇಶ್ ಇದ್ದಾರೆ –ಪ್ರಜಾವಾಣಿ ಚಿತ್ರ